**ಕರ್ನಾಟಕ ಸರ್ಕಾರ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ. 265/2021**

ಪಿ.ಡಬ್ಲ್ಯೂ: 3

ಸಿ.ಡಬ್ಲ್ಯೂ: 3

ಸಾಕ್ಷಿದಾರರ ಹೆಸರು : ಆಕಾಶ್

ತಂದೆಯ ಹೆಸರು : ಚಂದ್ರು ನಾಯ್ಕ

ವಯಸ್ಸು : 32 ವರ್ಷ

ಉದ್ಯೋಗ : ವ್ಯವಸಾಯ

ವಾಸಸ್ಥಳ : ಕರಕುಚ್ಚಿ

**ದಿನಾಂಕ: 30-01-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು 4-5 ವರ್ಷಗಳ ಹಿಂದೆ ನಾನು ಕರಕುಚ್ಚಿ ಗ್ರಾಮದಲ್ಲಿ ತೋಟದ ಹತ್ತಿರ ಕೆಲಸ ಮಾಡುತ್ತಿರುವ ಸಮಯದಲ್ಲಿ ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲಾತಿಗೆ ಸಹಿ ಮಾಡಿದ್ದು, ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2 (ಸಿ) ಎಂದು ಗುರುತಿಸಲಾಯಿತು.

ನಿಪಿ-4 ಮತ್ತು 5 ಛಾಯಚಿತ್ರಗಳಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು:** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿ: **11-04-2020** ರಂದು ಸಂಜೆ **4-30** ರಿಂದ **5-30** ಗಂಟೆ ಸಮಯದಲ್ಲಿನ ಭದ್ರಾ ಹೊಳೆಯ ಪಕ್ಕದಲ್ಲಿರುವ ರಾಮೋಜಿ ರಾವ್ ರವರ ಅಡಿಕೆ ತೋಟದ ಬಳಿ ಇರುವ ಕಚ್ಚಾ ರಸ್ತೆಯಲ್ಲಿ ಅಕ್ರಮವಾಗಿ ಮರಳನ್ನು ವಾಹನದಲ್ಲಿ ತುಂಬಿ ಸಾಗಿಸುತ್ತಿದ್ದ ವಿಚಾರವಾಗಿ ಮಹಜರ್ ಮಾಡಿದ್ದು, ಸದರಿ ಮಹಜರಿಗೆ ನಾನು ಸಹಿ ಹಾಕಿದ್ದು, ಆದರೆ ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ.

ನನ್ನ ಜೊತೆ ಚಾಸಾ-2 ರವರು ಸಹ ಸಹಿ ಹಾಕಿರುತ್ತಾರೆಂದರೆ ಸರಿಯಲ್ಲ. ಆ ಸಮಯದಲ್ಲಿ ಕೆಎ 18 ಸಿ 4311 ರ ಪಿಕ್ ಅಪ್ ವಾಹನದಲ್ಲಿದ್ದ ಮರಳನ್ನು ಪೊಲೀಸರು ವಶಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಾ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ.</u>**

ಪಾಟೀ ಸವಾಲು ಇಲ್ಲ

**<u>ಮರುವಿಚಾರಣೆಃ</u>** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

Sd/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**